Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 15-08-2022

**ಪತ್ರಿಕಾ ಪ್ರಕಟಣೆ:**

# ವಿಜೃಂಭಣೆಯಿಂದ ನೆರವೇರಿದ 75ನೇ ಸ್ವಾತಂತ್ರೋತ್ಸವ

ಕೆ.ಎಲ್.ಎಸ್. ವಿ.ಡಿ.ಐ.ಟಿ. ಹಳಿಯಾಳದಲ್ಲಿ 75ನೇ ವರ್ಷದ ಸ್ವಾತಂತ್ರ್ಯೋತ್ಸವವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಯಿತು. ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ವಿ.ಎ.ಕುಲಕರ್ಣಿಯವರು ಧ್ವಜಾರೋಹಣ ಮಾಡಿ ಮಾತನಾಡುತ್ತ ಸರ್ವರಿಗೂ ಸ್ವಾತಂತ್ರ್ಯದ ಅಮೃತಮಹೋತ್ಸವ ವರ್ಷದ ಶುಭಾಶಯ ತಿಳಿಸಿದರು. ಸ್ವಾತಂತ್ರ್ಯ ದೊರಕಿಸಲು ಹೋರಾಡಿದ ವೀರರನ್ನು ಸ್ಮರಿಸುತ್ತ, ಸ್ವಾತಂತ್ರ್ಯದ ಪರಿಕಲ್ಪನೆಯ ಚಿತ್ರಣ ನೀಡಿದರು. ದೇಶದ ಉನ್ನತಿಗೆ ಸ್ವಾತಂತ್ರ್ಯದ ಸದ್ಬಳಕೆಯಾಗಬೇಕು ಎಂದು ಕರೆ ನೀಡಿದರು. ಮಹಾವಿದ್ಯಾಲಯವು ಸಂವಿಧಾನ ನೀಡಿರುವ ಸ್ವಾತಂತ್ರದ ಇತಿಮಿತಿಯಲ್ಲಿ ಉತ್ತಮ ನಾಗರಿಕ ಅಭಿಯಂತರರನ್ನು ಸಮಾಜಕ್ಕೆ ನೀಡುತ್ತಿದೆ, ಜ್ಞಾನ ಹಾಗೂ ಕೌಶಲ್ಯದಿಂದ ವಿನೂತನ ತಂತ್ರಜ್ಞಾನಗಳನ್ನು ಆವಿಷ್ಕರಿಸಿ ದೇಶವು ಸಂಪೂರ್ಣ ತಾಂತ್ರಿಕ ಸ್ವಾವಲಂಬನೆ ಹೊಂದುವಂತೆ ಮಾಡುವ ಜವಾಬ್ದಾರಿ ಯುವ ಇಂಜಿನಿಯರ್‌ಗಳ ಮೇಲಿದೆ ಎಂದು ಹೇಳಿದರು. ಮಹಾವಿದ್ಯಾಲಯವನ್ನು ಪ್ಲಾಸ್ಟಿಕ್ ಮುಕ್ತ ಕ್ಯಾಂಪಸ್ ಮಾಡುವುದಾಗಿ ಇದೇ ಸಂದರ್ಭದಲ್ಲಿ ಘೋಷಿಸಿದರು. ಸಿವಿಲ್ ವಿಭಾಗದ ಇಕೋಕ್ಲಬ್ ವಿದ್ಯಾಲಯವನ್ನು ಪ್ಲಾಸ್ಟಿಕ್ ಮುಕ್ತ ಮಾಡುವ ಹೊಣೆಗಾರಿಕೆಯನ್ನು ಹೊತ್ತಿದೆ.

ಆಜಾದಿ ಕಾ ಅಮೃತಮಹೋತ್ಸವ ಪ್ರಯುಕ್ತ ಆಗಸ್ಟ್ 13 ರಿಂದಲೇ ಮಹಾವಿದ್ಯಾಲಯದಲ್ಲಿ ಹರ್ ಘರ್ ತಿರಂಗ ಅಭಿಯಾನ ಪ್ರಾರಂಭಿಸಲಾಗಿದ್ದು, ಇದರಡಿಯಲ್ಲಿ ಹಲವು ಸಾಂಸ್ಕೃತಿಕ ಸ್ಪರ್ಧಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಸ್ಪರ್ಧಾ ವಿಜೇತರಿಗೆ ಇದೇ ಸಂದರ್ಭದಲ್ಲಿ ಪುರಸ್ಕರಿಸಲಾಯಿತು. ಮಹಾವಿದ್ಯಾಲಯದ ಬೋಧಕ ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಪ್ರಾಂಶುಪಾಲರು

**Principal**
KLS Vishwanathrao Deshpande
Institute of Technology, Haliyal


KLS
VDIT


ವಿಶ್ವನಾಥರಾವ್
ಮಹಾವಿದ್ಯಾಲಯ